**1ನೇ ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಜೆಎಂಎಫ್‌ಸಿ ನ್ಯಾಯಾಲಯ, ನಂಜನಗೂಡು**

**ಸಿ.ಸಿ.ಸಂಖ್ಯೆಃ 210/2022**

**ಫಿರ್ಯಾದಿ ಃ- ರಾಜ್ಯದ ಪರವಾಗಿ ಬಿಳಿಗೆರೆ ಪೋಲೀಸ್ ಠಾಣೆ,**

**ವಿರುದ್ಧ**

**ಆರೋಪಿ ಃ-** ನಂಜಮ್ಮ, ಬಿನ್ ಲೇ. ಸಣ್ಣಪ್ಪ, 61 ವರ್ಷ,
ಮಲ್ಲುಪುರ ಗ್ರಾಮ, ನಂಜನಗೂಡು ತಾಲ್ಲೂಕು

**ಆ ಪಾ ದ ನೆ**

*ಶ್ರೀ ಕಿಶೋರ್ ಕುಮಾರ್ ಎಂ., 1ನೇ ಹೆಚ್ಚುವರಿ* ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ಬಿ.ಎ. ಎಲ್‌ಎಲ್.ಬಿ., ನಂಜನಗೂಡು ಆದ ನಾನು ಆರೋಪಿತರಾದ ನಿಮ್ಮ ಮೇಲೆ ಆಪಾದಿಸುವುದೇನೆಂದರೆ:-

ದಿನಾಂಕ 19.11.2021 ರಂದು ಬೆಳಗ್ಗೆ 11.00 ಗಂಟೆ ಸಮಯದಲ್ಲಿ ಬಿಳಿಗೆರೆ ಪೊಲೀಸ್ ಠಾಣಾ ಸರಹದ್ದಿನ ಮಲ್ಲುಪುರ ಗ್ರಾಮದ ಬಸ್ ನಿಲ್ದಾಣದ ಪಕ್ಕ ಸಾರ್ವಜನಿಕ ಸ್ಥಳದಲ್ಲಿ ಆರೋಪಿಯಾದ ನೀವು ಒಟ್ಟು 1053/- ರೂ. 9 ಪೈಸೆ ಬೆಲೆ ಬಾಳುವ ಒಟ್ಟು 2700 ಮಿ.ಲೀ. ಮಧ್ಯ ಇರುವ 90 ಎಂ.ಎಲ್.ನ 30 ಹೈವಾಡ್ಸ್ ಚೀಯರ್ ವಿಸ್ಕಿ ಪೌಚ್‌ಗಳನ್ನು ಯಾವುದೇ ಪರವಾನಿಗೆ ಇಲ್ಲದೆ ಅಕ್ರಮವಾಗಿ ಹೆಚ್ಚಿನ ಬೆಲೆಗೆ ಮಾರಾಟ ಮಾಡುವ ಉದ್ದೇಶದಿಂದ ತಮ್ಮ ಅಕ್ರಮ ಸ್ವಾಧೀನದಲ್ಲಿ ಇಟ್ಟುಕೊಂಡಿರುತ್ತೀರಿ ಆದ್ದರಿಂದ ಆರೋಪಿಯಾದ ನೀವು ಕರ್ನಾಟಕ ಅಬಕಾರಿ ಕಾಯಿದೆ ಕಲಂ 32(1) ರಡಿಯಲ್ಲಿ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆತೆಯಲ್ಲಿ ಎಸಗಿರುವಿರೆಂದು ಈ ಮೂಲಕ ಆಪಾದಿಸುತ್ತೇನೆ.

ಪ್ರಶ್ನೆ.1- ಈಗ ಓದಿ ಹೇಳಿದ ಆಪಾದನೆ ನಿಮಗೆ ತಿಳಿಯಿತೆ?

ಉತ್ತರ ಃ

ಪ್ರಶ್ನೆ.2- ನೀವು ಮೇಲ್ಕಂಡ ಆಪಾದನೆಯನ್ನು ಒಪ್ಪಿಕೊಳ್ಳುವಿರೋ? ಅಥವಾ
ವಿಚಾರಣೆಯಾಗಬೇಕೆಂದು ಬಯಸುವಿರೋ?

ಉತ್ತರಃ-

ಮೇಲ್ಕಂಡ ದಿನಾಂಕ, ವೇಳೆ ಮತ್ತು ಸ್ಥಳದಲ್ಲಿ ಆರೋಪಿಯಾದ ನೀವು ಈ ಮೇಲೆ ಹೇಳಿದಷ್ಟು ಪ್ರಮಾಣದ ಮಧ್ಯವನ್ನು ವಿಧಿ ವಿರುದ್ಧವಾಗಿ ತಮ್ಮ ಸ್ವಾಧೀನದಲ್ಲಿ ಇಟ್ಟುಕೊಂಡಿದ್ದು ಹಾಗೂ ಮೇಲ್ಕಂಡ ಮದ್ಯದ ವಸ್ತುಗಳಲ್ಲಿ ಎಥೆನಾಲ್ ಅಂಶ ಇರುವ ಕಾರಣ, ಆರೋಪಿಯಾದ ನೀವು ಕರ್ನಾಟಕ ಅಬಕಾರಿ ಕಾಯಿದೆ ಕಲಂ 34 ರಡಿಯಲ್ಲಿ ದಂಡನೀಯ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞತೆಯಲ್ಲಿ ಎಸಗಿರುವಿರೆಂದು ಈ ಮೂಲಕ ಆಪಾದಿಸುತ್ತೇನೆ.

ಪ್ರಶ್ನೆ.1- ಈಗ ಓದಿ ಹೇಳಿದ ಆಪಾದನೆ ನಿಮಗೆ ತಿಳಿಯಿತೆ?

ಉತ್ತರ ಃ

ಪ್ರಶ್ನೆ.2- ನೀವು ಮೇಲ್ಕಂಡ ಆಪಾದನೆಯನ್ನು ಒಪ್ಪಿಕೊಳ್ಳುವಿರೋ? ಅಥವಾ ವಿಚಾರಣೆಯಾಗಬೇಕೆಂದು ಬಯಸುವಿರೋ?

ಉತ್ತರಃ-

(ಮೇಲ್ಕಂಡ ಆಪಾದನೆಯನ್ನು ತೆರೆದ ನ್ಯಾಯಾಲಯದಲ್ಲಿ ಆರೋಪಿಗೆ ಓದಿ ಹೇಳಿ ಅವರ ಉತ್ತರವನ್ನು ಅವರು ಉತ್ತರಿಸಿದಂತೆಯೇ ಬರೆದುಕೊಂಡಿದ್ದು ಸಂಪೂರ್ಣ ಹಾಗೂ ಸರಿಯಾದ ಮಾಹಿತಿಯನ್ನೊಳಗೊಂಡಿದೆ ಎಂದು ತೆರೆದ ನ್ಯಾಯಾಲಯದಲ್ಲಿ ದಿಃ18.10.2022 ರಂದು ದೃಢೀಕರಿಸಿದ್ದೇನೆ.)

1ನೇ ಹೆಚ್ಚುವರಿ ಸಿವಿಲ್ ಜಡ್ಜ್ ಮತ್ತು ಜೆಎಂಎಫ್‌ಸಿ,
ನಂಜನಗೂಡು